**Prajavani, dated 06-03-2022, Page No. 3D, Bengaluru City.**

10ರಂದು ವಿಟಿಯು ಘಟಿಕೋತ್ಸವ

# ರಾಯಚೂರಿನ ಬುಶ್ರಾಗೆ ದಾಖಲೆಯ 16 ಚಿನ್ನದ ಪದಕ

ಪ್ರಜಾವಾಣಿ ವಾರ್ತೆ

ಬೆಳಗಾವಿ: 'ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ವಿಟಿಯು)ದ 21ನೇ ವಾರ್ಷಿಕ ಘಟಿಕೋತ್ಸವವನ್ನು ಮಾರ್ಚ್ 10ರಂದು ಬೆಳಿಗ್ಗೆ 11.30ಕ್ಕೆ ಇಲ್ಲಿನ 'ಜ್ಞಾನಸಂಗಮ' ಕ್ಯಾಂಪಸ್‌ನಲ್ಲಿ ಆಯೋಜಿಸಲಾಗಿದೆ' ಎಂದು ಕುಲಪತಿ ಪ್ರೊ.ಕರಿಸಿದ್ದಪ್ಪ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಶನಿವಾರ ಮಾತನಾಡಿದ ಅವರು, 'ಈ ಬಾರಿಯ ಘಟಿಕೋತ್ಸವದಲ್ಲಿ ಅತಿ ಹೆಚ್ಚಿನ ಚಿನ್ನದ ಪದಕ ಪಡೆಯುತ್ತಿರುವವರ ಪಟ್ಟಿಯಲ್ಲಿ ಹೆಚ್ಚಿನವರು ವಿದ್ಯಾರ್ಥಿನಿಯರೇ ಇದ್ದಾರೆ. ವಿದ್ಯಾರ್ಥಿ ಇರುವುದು ಒಬ್ಬರಷ್ಟೆ' ಎಂದರು.

**ಚಿನ್ನದ ಪದಕಗಳನ್ನು ಬಾಚಿದ ವಿದ್ಯಾರ್ಥಿನಿಯರು:** ರಾಯಚೂರಿನ ಎಸ್‌ಎಲ್‌ಎನ್ ಕಾಲೇಜಿನ ಬಿಇ ಸಿವಿಲ್ ಎಂಜಿನಿಯರಿಂಗ್ ವಿಭಾಗದ ವಿದ್ಯಾರ್ಥಿನಿ ಬುಶ್ರಾ ಮತೀನ್ ಒಟ್ಟು 16 ಚಿನ್ನದ ಪದಕಗಳನ್ನು ಪಡೆದಿದ್ದಾರೆ. ಬೆಂಗಳೂರು ಬಿ.ಎನ್.ಎಂ. ತಾಂತ್ರಿಕ ಸಂಸ್ಥೆಯ ಇ ಅಂಡ್ ಸಿ ವಿಭಾಗದ ಸ್ವಾತಿ ದಯಾನಂದ, ಬೆಳಗಾವಿಯ ಕೆ.ಎಲ್.ಇ. ಡಾ.ಎಂ.ಎಸ್. ಶೇಷಗಿರಿ ಎಂಜಿನಿಯರಿಂಗ್ ಕಾಲೇಜಿನ ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಭಾಗದ ವಿವೇಕ್ ಭದ್ರಕಾಳಿ, ಬಳ್ಳಾರಿಯ ಬಳ್ಳಾರಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್‌ನ ಇ ಅಂಡ್ ಇ ವಿಭಾಗದ ಚಂದನಾ ಎಂ. ತಲಾ 7 ಚಿನ್ನದ ಪದಕ ಪಡೆದಿದ್ದಾರೆ.

ಬೆಂಗಳೂರಿನ ಸಿಎಂಆರ್ ತಾಂತ್ರಿಕ ಕಾಲೇಜಿನ ಕಂಪ್ಯೂಟರ್ ಸೈನ್ಸ್ ಅಂಡ್ ಎಂಜಿನಿಯರಿಂಗ್‌ನ ರಮ್ಯಾ ಟಿ. 6, ಆರ್‌ಎನ್‌ಎಸ್‌ಐಟಿಯ ಎಲೆಕ್ಟ್ರಾನಿಕ್ಸ್ ಅಂಡ್ ಇನ್‌ಸ್ಟ್ರುಮೆಂಟೇಷನ್ ವಿಭಾಗದ ಪ್ರಜ್ಞಾ ಎನ್., ಶಿವಮೊಗ್ಗದ ಜೆಎನ್‌ಎನ್‌ಸಿಇ ಮಾಹಿತಿ ತಂತ್ರಜ್ಞಾನ ವಿಭಾಗದ ಪಲ್ಲವಿ ಮತ್ತು ಬೆಂಗಳೂರಿನ ಆರ್‌ಎನ್‌ಎಸ್‌ಐಟಿಯ ಎಂಬಿಎ ವಿದ್ಯಾರ್ಥಿನಿ ತೇಜಸ್ವಿನಿ ಆರ್. ತಲಾ 4 ಚಿನ್ನದ ಪದಕಗಳನ್ನು ಗಳಿಸಿದ್ದಾರೆ. ಬೆಂಗಳೂರಿನ ಆರ್‌ಎನ್‌ಎಸ್‌ಐಟಿಯ ಎಂಸಿಎ ವಿದ್ಯಾರ್ಥಿನಿ ಅಶ್ವಿತಾ ಎನ್. ಮತ್ತು ದಾವಣಗೆರೆಯ ಯುಬಿಡಿಟಿ ಕಾಲೇಜಿನ ಎಂ.ಟೆಕ್. ವಿದ್ಯಾರ್ಥಿನಿ ಸವಿತಾ ಎಚ್.ಟಿ. ತಲಾ 3 ಚಿನ್ನದ ಪದಕ ತಮ್ಮದಾಗಿಸಿಕೊಂಡಿದ್ದಾರೆ.

'57,498 ಬಿಇ/ಬಿ.ಟೆಕ್, 902 ಬಿ.ಆರ್ಕ್, 12 ಬಿ ಪ್ಲಾನ್, 4,362 ಎಂಬಿಎ, 1,387 ಎಂಸಿಎ, 1,292 ಎಂ.ಟೆಕ್, 73 ಎಂ.ಆರ್ಕ್ ಮತ್ತು 33 ಪಿಜಿ ಡಿಪ್ಲೊಮಾ, 515 ಪಿಎಚ್.ಡಿ, 4 ಎಂ.ಎಸ್ಸಿ (ಎಂಜಿನಿಯರಿಂಗ್) ಬೈ ರಿಸರ್ಚ್ ಮತ್ತು 3 ಇಂಟಿಗ್ರೇಟೆಡ್ ಡುಯೆಲ್ ಡಿಗ್ರಿ ಪದವಿಗಳನ್ನು ಪ್ರದಾನ ಮಾಡಲಾಗುವುದು' ಎಂದು ಪ್ರೊ.ಕರಿಸಿದ್ದಪ್ಪ ವಿವರಿಸಿದರು.